ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 16–02–2019**

# ಪತ್ರಿಕಾ ಆಮಂತ್ರಣ

1. ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ ವತಿಯಿಂದ

ಮಾನವ ಕಳ್ಳಸಾಗಾಣಿಕೆ ತಡೆಗಟ್ಟುವ ಕುರಿತು ನ್ಯಾಯಾಂಗ ಅಧಿಕಾರಿಗಳೊಂದಿಗೆ ವಿಚಾರ ಸಂಕಿರಣ ಕಾರ್ಯಕ್ರಮ:

**ಉದ್ಘಾಟನೆ:**

ಗೌರವಾನ್ವಿತ ಶ್ರೀ ನ್ಯಾಯಮೂರ್ತಿ ಎಲ್. ನಾರಾಯಣಸ್ವಾಮಿ,
ಹಂಗಾಮಿ ಮುಖ್ಯ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಪೋಷಕರು.

**ಅಧ್ಯಕ್ಷತೆ:**

ಗೌರವಾನ್ವಿತ ಶ್ರೀ ನ್ಯಾಯಮೂರ್ತಿ ಅರವಿಂದಕುಮಾರ್,
ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿಯ ಅಧ್ಯಕ್ಷರು.

ದಿನಾಂಕ: 17–02–2019, ಭಾನುವಾರ ಸಮಯ : ಬೆಳಿಗ್ಗೆ 10.00 ಗಂಟೆಗೆ.

ಸ್ಥಳ: ಕರ್ನಾಟಕ ಉಚ್ಚ ನ್ಯಾಯಾಲಯದ 2ನೇ ಮಹಡಿಯ ಪ್ರಧಾನ ಪೋಷಕರ ಕೊಠಡಿ, ಬೆಂಗಳೂರು.

ಪತ್ರಿಕಾ ಪ್ರಕಟಣೆ

# ರಾಜ್ಯಾದ್ಯಂತ ಮಾರ್ಚ್ 10 ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

ಬೆಂಗಳೂರು, ಫೆಬ್ರವರಿ 16 (ಕರ್ನಾಟಕ ವಾರ್ತೆ)

ರಾಷ್ಟ್ರೀಯ ಲಸಿಕಾ ದಿನವಾದ ಮಾರ್ಚ್ 10 ರಂದು ರಾಜ್ಯಾದ್ಯಂತ ಐದು ವರ್ಷದೊಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಪಿ. ರವಿಕುಮಾರ್ ಅವರು ತಿಳಿಸಿದರು.

ಅವರು ಇಂದು ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾದ ಸಭೆಯಲ್ಲಿ ಈ ವಿಷಯ ತಿಳಿಸಿದರು.

ಭಾರತವು ಪೋಲಿಯೋ ಮುಕ್ತ ರಾಷ್ಟ್ರವೆಂಬ ಬಿರುದನ್ನು ವಿಶ್ವ ಆರೋಗ್ಯ ಸಂಸ್ಥೆಯಿಂದ 2014 ರಲ್ಲಿ ಪಡೆದುಕೊಂಡಿತು. 2018 ರಲ್ಲಿ ಅಫ್ಘಾನಿಸ್ತಾನದಲ್ಲಿ 21 ಹಾಗೂ ಪಾಕಿಸ್ಥಾನದಲ್ಲಿ 12 ಪ್ರಕರಣಗಳು ಪತ್ತೆಯಾಗಿದ್ದವು. ಆದ್ದರಿಂದ ಭಾರತದಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಈ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಶಿಕ್ಷಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ನಗರಾಭಿವೃದ್ಧಿ, ಕಾರ್ಮಿಕ, ಕೆಪಿಟಿಸಿಎಲ್, ಸಾರಿಗೆ, ರೈಲ್ವೆ, ಆಯುಷ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ರಕ್ಷಣಾ ಹಾಗೂ ಇನ್ನಿತರ ಇಲಾಖೆಗಳು ಕೈಜೋಡಿಸಿ ಯಶಸ್ವಗೊಳಿಸಬೇಕೆಂದರು.

ಪ್ರತಿ ಶಿಶುವಿಗೆ 5 ವರಸೆ ಒಪಿವಿ ಮತ್ತು 2 ವರಸೆ ಐಪಿವಿ ಲಸಿಕೆಯನ್ನು ನೀಡಲಾಗುತ್ತದೆ. ಪ್ರತಿ ವರ್ಷ ಎರಡು ಸುತ್ತುಗಳಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಈ ವರ್ಷ ಕೇವಲ 1 ಬಾರಿ ಅಂದರೆ ಮಾರ್ಚ್ 10 ರಂದು ಮಾತ್ರ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಲಸಿಕೆ ಹಾಕಲು 32,571 ಬೂತ್‌ಗಳನ್ನು ತೆರೆಯಲಾಗಿದೆ. ಅಂದಾಜು 64,85,980 ಮಕ್ಕಳಿಗೆ 1,10,351 ಲಸಿಕಾ ಕಾರ್ಯಕರ್ತೆಯರು ಲಸಿಕೆ ಹಾಕುವರು. ಅಲ್ಲದೆ 6047 ಮೇಲ್ವಿಚಾರಕರು, 952 ಸಂಚಾರಿ ತಂಡ ಹಾಗೂ 2170 ಟ್ರಾನ್ಸಿಟ್ ತಂಡಗಳು ಲಸಿಕಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಲಿದ್ದಾರೆ.

ಈ ಲಸಿಕಾ ಕಾರ್ಯಕ್ರಮದಲ್ಲಿ ಲಸಿಕೆಯಿಂದ ಯಾವೊಬ್ಬ ಮಕ್ಕಳು ಸಹ ದೂರ ಉಳಿಯದಂತೆ ಕ್ರಮವಹಿಸಲು ಮುನ್ನೆಚ್ಚರಿಕೆ ತೆಗೆದುಕೊಳ್ಳಲಾಗಿದೆ ಎಂದರು.

ಪೋಲಿಯೋ ಸೋಂಕು ಮಕ್ಕಳಲ್ಲಿ ತೀವ್ರ ತರವಾದ ಅಸ್ವಸ್ಥತೆ ಮತ್ತು ಪಾರ್ಶ್ವವಾಯು ಉಂಟುಮಾಡಿ ಸಾವು ಸಂಭವಿಸುವ ಸಾಧ್ಯತೆಯನ್ನು ಹೆಚ್ಚಿಸುತ್ತದೆ. ಆದ್ದರಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳು ಕಡ್ಡಾಯವಾಗಿ ಲಸಿಕೆ ಹಾಕಿಸಿಕೊಳ್ಳಬೇಕೆಂದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ವಿವಿಧ ಇಲಾಖಾ ಮುಖ್ಯಸ್ಥರು, ಅಧಿಕಾರಿಗಳು ಹಾಜರಿದ್ದರು.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಫೆಬ್ರವರಿ 16 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 17-02-2019 ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

### I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಶ್ರೀಮತಿ ನಮಿತ ಶಂಕರ್ ಮತ್ತು ತಂಡದವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

# <u>ಮೂಲ ದಾಖಲೆ ಪರಿಶೀಲನೆ</u>

ಬೆಂಗಳೂರು, ಫೆಬ್ರವರಿ 16 (ಕರ್ನಾಟಕ ವಾರ್ತೆ)

2015 ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಗ್ರೂಫ್ ಎ ಮತ್ತು ಗ್ರೂಫ್ ಬಿ ವೃಂದದ ಒಟ್ಟು 428 ಹುದ್ದೆಗಳ ನೇಮಕಾತಿಯ ಸಂಬಂಧ ಸಂದರ್ಶನಕ್ಕೆ 1:5 ಅನುಪಾತದಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಈಗಾಗಲೇ ಪ್ರಕಟಿಸಲಾಗಿದೆ. ಪ್ರಸ್ತುತ ಮೂಲ ದಾಖಲೆಗಳ ಪರಿಶೀಲನೆಯನ್ನು ದಿನಾಂಕ 28-02-2019 ರಿಂದ 14-03-2019 ರವರೆಗೆ ನಡೆಸಲಾಗುತ್ತದೆ. ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರವನ್ನು ಪ್ರತ್ಯೇಕವಾಗಿ ರವಾನಿಸಲಾಗಿದ್ದು, ಸದರಿ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗಾಗಿ ಆಯೋಗದ ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು ಇಲ್ಲಿ ಸೂಚಿತ ದಿನಾಂಕ ಹಾಗೂ ಸಮಯದಂದು ತಪ್ಪದೇ ಹಾಜರಾಗಬೇಕು. ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರ ಸ್ವೀಕೃತವಾಗದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಕೇಂದ್ರ ಕಚೇರಿಯನ್ನು ಮೂಲ ದಾಖಲೆಗಳ ಪರಿಶೀಲನೆಗೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಲು ಆಯೋಗದ ಪ್ರಕಟಣೆ ತಿಳಿಸಿದೆ.

# ಸಚಿವರ ಪ್ರವಾಸ

ಬೆಂಗಳೂರು, ಫೆಬ್ರವರಿ 16 (ಕರ್ನಾಟಕ ವಾರ್ತೆ)

ಕಾರ್ಮಿಕ ಸಚಿವ ವೆಂಕಟರಮಣಪ್ಪ ಅವರು ಫೆಬ್ರವರಿ 17 ರಿಂದ 18 ರವರೆಗೆ ಕೋಲಾರ ಮತ್ತು ತುಮಕೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.

# ರಸ್ತೆ ಸಂಚಾರ ಸಮೀಕ್ಷೆ

ಬೆಂಗಳೂರು, ಫೆಬ್ರವರಿ 16 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯದ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ವ್ಯಾಪ್ತಿಯಲ್ಲಿ ರಾಜ್ಯ ಹೆದ್ದಾರಿಗಳು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಓಡಾಡುವ ವಾಹನಗಳ ಸಂಚಾರದ ಸಮೀಕ್ಷೆಯನ್ನು ನಡೆಸಲಾಗುತ್ತಿದ್ದು, 2019 ನೇ ಸಾಲಿನ ರಸ್ತೆ ಸಂಚಾರ ಸಮೀಕ್ಷೆಯನ್ನು ದಿನಾಂಕ: 20-2-2019 ರ ಬೆಳಿಗ್ಗೆ 6.00 ಗಂಟೆಯಿಂದ 22-02-2019 ರ ಬೆಳಿಗ್ಗೆ 6.00 ಗಂಟೆಯವರೆಗೆ ಸತತವಾಗಿ

2 ದಿನಗಳ ಕಾಲ ನಡೆಸಲಾಗುವುದು. ಈ ಸಮೀಕ್ಷೆಗೆ ಸುಮಾರು 3556 ಗಣತಿ ಕೇಂದ್ರಗಳನ್ನು ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಆಯ್ಕೆ ಮಾಡಲಾಗಿದೆ.

ಈ ಸಮೀಕ್ಷೆಯ ಮುಖ್ಯ ಉದ್ದೇಶ, ವಾಹನ ಸಂಚಾರದ ಬೆಳವಣಿಗೆ ತೀವ್ರತೆಯನ್ನು ಗಮನಿಸಿ ರಸ್ತೆಗಳ ಮೇಲ್ಮೈಯನ್ನು ಅಭಿವೃದ್ಧಿಪಡಿಸುವುದು, ರಸ್ತೆಗಳನ್ನು ಅಗಲಪಡಿಸುವುದು ಹಾಗೂ ರಸ್ತೆಗಳನ್ನು ಮೇಲ್ದರ್ಜೆಗೇರಿಸುವುದು ಆಗಿದೆ. ಇದರಿಂದ ರಸ್ತೆಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಸರ್ಕಾರವು ರೂಪಿಸಲು ಮತ್ತು ಕೈಗೆತ್ತಿಕೊಳ್ಳಲು ಅನುಕೂಲವಾಗುವುದು.

ವಾಹನ ಸಂಚಾರ ವಿವರಗಳನ್ನು ಸಂಗ್ರಹಿಸಲು ರಾಜ್ಯದಲ್ಲಿನ 3556 ಗಣತಿ ಕೇಂದ್ರಗಳಲ್ಲಿ ಸಹಾಯಕ ಇಂಜಿನಿಯರ್/ಕಿರಿಯ ಇಂಜಿನಿಯರ್‌ಗಳನ್ನು ನೇಮಿಸಲಾಗಿದೆ. ದಿನಾಂಕ 20-02-2019 ರಿಂದ 22-02-2019 ರವರೆಗೆ ನಡೆಸಲಾಗುವ ಈ ವಾಹನ ಸಂಚಾರದ ಸಮೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ವಾಹನ ಚಾಲಕರು ಮತ್ತು ಸಾರ್ವಜನಿಕರು ಸಹಕರಿಸುವಂತೆ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದಕ್ಷಿಣ),ಬೆಂಗಳೂರು ಇವರು ಕೋರಿದ್ದಾರೆ.

**ಬೆಂಗಳೂರು ಜಲಮಂಡಲಿ: ಫೆಬ್ರವರಿ 18 ರಂದು ಸಕಾನಿಅ(ದಕ್ಷಿಣ-3)**

**ಉಪವಿಭಾಗದಲ್ಲಿ ನೀರಿನ ಅದಾಲತ್**

ಬೆಂಗಳೂರು ಜಲಮಂಡಲಿಯ ಸಕಾನಿಅ(ದಕ್ಷಿಣ-3) ಉಪವಿಭಾಗದಲ್ಲಿ ಸೋಮವಾರ ದಿನಾಂಕ: 18.02.2019 ರಂದು ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆಗೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ: 18.02.2019 ರಂದು ಸಕಾನಿಅ(ದಕ್ಷಿಣ-3) ಉಪವಿಭಾಗ ವ್ಯಾಪ್ತಿಗೆ ಬರುವ ಬಿ.ಟಿ.ಎಂ. ಲೇಔಟ್-1 & 2 ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು 9ನೇ ಮುಖ್ಯ ರಸ್ತೆ, ಬಿ.ಟಿ.ಎಂ 2ನೇ ಹಂತ ಇಲ್ಲಿನ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ದಕ್ಷಿಣ-3) ಉಪವಿಭಾಗ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯ ನಿರ್ವಾಹಕ ಅಭಿಯಂತರರು (ಆಗ್ನೇಯ-2): 22945389, ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ದಕ್ಷಿಣ-3): 22945392.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888

ಗೆ ಸಂಪರ್ಕಿಸಬಹುದಾಗಿದೆ. ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳಬಹುದಾಗಿದೆ.

## BWSSB:Water Adalath in AEE(South-3) sub division on February 18th

BWSSB water Adalath is held on 18.02.2019 in AEE(South-3) sub division from 9:30 am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of BTM layout 1&2 service station coming under AEE(South-3) sub division, will be discussed in detail & problems will be settled in the office of the Assistant Executive Engineer (South-3) sub division, 9th main, BTM 2nd stage.

Details regarding the adalath can be obtained by the office of EE(South East-2): 22945389, or office of AEE(South-3): 22945392.

For any problems regarding the water supply and all, publics can contact 24x7 call centre: 22238888 helpline number:1916 & whats app no: 8762228888. Public can utilize this adalath facilities to solve the problems regarding water supply.

## ಬೆಂಗಳೂರು ಗ್ರಾಮಾಂತರ ಜಿಲ್ಲೆ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆ

ಬೆಂಗಳೂರು, ಫೆಬ್ರವರಿ 16 (ಕರ್ನಾ–ಟಕ ವಾರ್ತೆ)

ಅಧ್ಯಕ್ಷರು, ಪ್ರಾದೇಶಿಕ- ಸಾರಿಗೆ ಪ್ರಾಧಿಕಾರ ಬೆಂಗಳೂರು (ಗ್ರಾಮಾಂತರ) ಹಾಗೂ ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಬೆಂಗಳೂರು (ಗ್ರಾಮಾಂತರ)ದ ಸಭೆ ದಿನಾಂಕ 19-02-2019 ರಂದು ಬೆಳಿಗ್ಗೆ 11-00 ಘಂಟೆಗೆ ಜರುಗಲಿದ್ದು, ಈ ಸಭೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಿಸಿದ ಸಾರಿಗೆ ಸೌಕರ್ಯಗಳ ವ್ಯವಸ್ಥೆಯ ಕುರಿತು ಬರುವ ಅಹವಾಲುಗಳ ಆಲಿಕೆ ಮತ್ತು ಮಜಲು ವಾಹನ ರಹದಾರಿಗಳ ಮಾರ್ಗದ ಕುರಿತು ಚರ್ಚಿಸಲಾಗುವುದು. ಆಸಕ್ತರು ಸಭೆಯಲ್ಲಿ ಭಾಗವಹಿಸಲು ಕಾರ್ಯದರ್ಶಿ, ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಬೆಂಗಳೂರು(ಗ್ರಾಮಾಂತರ) ಮತ್ತು ಉಸಾಅ/ಹಿಪ್ರಾ.ಸಾ.ಅ. ಬೆಂಗಳೂರು ಕೇಂದ್ರ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.